# ಪತ್ರಿಕಾ ತುಣುಕುಗಳು
# PAPER CLIPPINGS

4

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 21/8/2020

## ಸೆ. 21 ರಿಂದ 30ರ ವರೆಗೆ ಅಧಿವೇಶನ

ಪ್ರ.ವಾ. 21-8-20

ಬೆಂಗಳೂರು: ವಿಧಾನಮಂಡಲದ ಮುಂಗಾರು ಅಧಿವೇಶನವನ್ನು ಸೆ.21 ರಿಂದ ಸೆ.30 ರವರೆಗೆ ನಡೆಸಲು ಗುರುವಾರ ನಡೆದ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಮುಂಗಾರು ಅಧಿವೇಶನವನ್ನು ಸೆಪ್ಟೆಂಬರ್ 23 ಕ್ಕೂ ಮೊದಲೇ ಆರಂಭಿಸಬೇಕಿತ್ತು. ಆದ್ದರಿಂದ ಸೆ.21 ರಿಂದ ಪ್ರಾರಂಭಿಸಲು ದಿನಾಂಕ ನಿಗದಿ ಮಾಡಲಾಗಿದೆ ಎಂದು ಸಂಪುಟ ಸಭೆಯ ಸಚಿವ ಜೆ.ಸಿ. ಮಾಧುಸ್ವಾಮಿ ಸುದ್ದಿಗಾರರಿಗೆ ತಿಳಿಸಿದರು.

ಅಧಿವೇಶನವನ್ನು ಬೆಂಗಳೂರಿನಲ್ಲೇ ನಡೆಸಲಾಗುವುದು. ಅಧಿವೇಶನದ ಸ್ಥಳ ಇತ್ಯಾದಿ ವಿಷಯಗಳ ಬಗ್ಗೆ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮತ್ತು ವಿಧಾನಪರಿಷತ್ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅವರ ಜತೆ ಮಾತುಕತೆ ನಡೆಸಿ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.